# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು** | : | **ಶ್ರೀ ಆರ್. ಧರ್ಮಸೇನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1111** |
| **ಉತ್ತರಿಸಬೇಕಾದ ದಿನಾಂಕ** | : | **21.09.2021** |
| **ಉತ್ತರಿಸಬೇಕಾದ ಸಚಿವರು** | : | **ಸಹಕಾರ ಸಚಿವರು** |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಎಷ್ಟು ಗೃಹ ನಿರ್ಮಾಣ ಸಹಕಾರ ಸಂಘಗಳು ಅಸ್ತಿತ್ವದಲ್ಲಿವೆ; ಅವುಗಳಲ್ಲಿ ಅತ್ಯುತ್ತಮವಾಗಿ ಕೆಲಸ ಮಾಡುತ್ತಿರುವ ಸಹಕಾರ ಸಂಘಗಳೆಷ್ಟು; ನಿಷ್ಕ್ರಿಯವಾದ ಮತ್ತು ದುರಾಡಳಿತದಿಂದ ಸರಿಯಾಗಿ ನಡೆಯದ ಸಂಘಗಳೆಷ್ಟು; | ರಾಜ್ಯದಲ್ಲಿ ದಿನಾಂಕ:31.03.2021ರ ಅಂತ್ಯಕ್ಕೆ ಒಟ್ಟು 1828 ಗೃಹ ನಿರ್ಮಾಣ ಸಹಕಾರ ಸಂಘಗಳು ಇದ್ದು, 1187 ಕಾರ್ಯನಿರತ, 279 ಸ್ಥಗಿತ ಮತ್ತು 362 ಗೃಹ ನಿರ್ಮಾಣ ಸಹಕಾರ ಸಂಘಗಳು ಸಮಾಪನೆಯಲ್ಲಿರುತ್ತವೆ. |
| ಆ) | ಬೆಂಗಳೂರು ಸುತ್ತಮುತ್ತ ಜಮೀನುಗಳ ಇಲ್ಲದಿರುವಾಗ ಸದಸ್ಯರಿಗೆ ಹಂಚಲು ನಿವೇಶನ ಮಾಡದ ಪರಿಸ್ಥಿತಿ ಇರುವಾಗ ಬೆಂಗಳೂರು ನಗರದಲ್ಲಿರುವ ಈ ಗೃಹ ನಿರ್ಮಾಣ ಸಹಕಾರ ಸಂಘಗಳು ಯಾವ ರೀತಿ ಕಾರ್ಯನಿರ್ವಹಿಸುತ್ತದೆ; ಯಾವ ಯಾವ ಚಟುವಟಿಕೆಗಳನ್ನು ನಡೆಸುತ್ತದೆ? | ಗೃಹ ನಿರ್ಮಾಣ ಸಹಕಾರ ಸಂಘಗಳು ತಮ್ಮ ಉಪನಿಯಮಗಳಲ್ಲಿ ಅವಕಾಶ ಮಾಡಿಕೊಂಡಂತೆ ಕಾರ್ಯವ್ಯಾಪ್ತಿಗನುಗುಣವಾಗಿ ಬೆಂಗಳೂರಿನ ಹೊರ ವಲಯದಲ್ಲಿ ಬಡಾವಣೆ ರಚಿಸಲು ಅವಕಾಶವಿರುತ್ತದೆ. ಅದರಂತೆ ಬಡಾವಣೆ ನಿರ್ಮಿಸಿ ನಿವೇಶನಗಳನ್ನು ರಚಿಸಲು ಕ್ರಮ ಕೈಗೊಂಡಿರುತ್ತಾರೆ.<br><br>ಗೃಹ ನಿರ್ಮಾಣ ಸಹಕಾರ ಸಂಘಗಳು ಉಪನಿಯಮಗಳ ಅವಕಾಶಗಳ ರೀತ್ಯಾ ಬಡಾವಣೆ ಅಭಿವೃದ್ಧಿಪಡಿಸಿ ತನ್ನ ಸದಸ್ಯರಿಗೆ ನಿವೇಶನ ಹಂಚಿಕೆ/ನೋಂದಣಿ ಮಾಡುವುದು, ಫ್ಲ್ಯಾಟ್ ಗಳನ್ನು ನಿರ್ಮಿಸುವುದು, ಗೃಹ ನಿರ್ಮಾಣ ಹಾಗೂ ರಿಪೇರಿಗಾಗಿ ಸಾಲ ನೀಡುವ ಚಟುವಟಿಕೆಗಳನ್ನು ನಡೆಸುತ್ತಿವೆ. |

**ಸಿಒ 40 ಸಿಹೆಚ್ಎಸ್ 2021 (ಇ)**

**(ಎಸ್.ಟಿ.ಸೋಮಶೇಖರ್)**
**ಸಹಕಾರ ಸಚಿವರು**